# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 595 (682) |
| ಉತ್ತರಿಸುವ ದಿನಾಂಕ | 12-07-2023 |
| ಮಾನ್ಯ ಸದಸ್ಯರ ಹೆಸರು | ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಂದಾಯ ನಿವೇಶನ ಎಂದರೇನು; ಕಾನೂನುಗಳಲ್ಲಿ ಇರುವ ಮಾನ್ಯತೆ ಎಷ್ಟು; (ವಿವರ ನೀಡುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ: RD 174 MUNOMU 2005 ದಿನಾಂಕ:23-08-2005 ರನ್ವಯ ಕಂದಾಯ ನಿವೇಶನವನ್ನು The Karnataka Regularization of Unauthorized Constructions in Urban Areas Act 1991 ರಲ್ಲಿ ಈ ಕೆಳಕಂಡಂತೆ ವ್ಯಾಖ್ಯಾನಿಸಲಾಗಿದೆ. ಸದರಿ ಕಂದಾಯ ನಿವೇಶನಗಳು ಅನಧಿಕೃತ (illegal) ನಿವೇಶನಗಳಾಗಿರುತ್ತವೆ.<br><br>**Revenue Site:** Means a Site formed without approval under the relevant law relating to town and country planning or the erection of building on land which has not been diverted in accordance with section 95 of the Karnataka Land Revenue Act 1964. |
| ಆ | ರಾಜ್ಯದಲ್ಲಿ ಕಂದಾಯ ನಿವೇಶನಗಳ ನೋಂದಣಿಯನ್ನು ಸ್ಥಗಿತಗೊಳಿಸಿರುವುದು ನಿಜವೇ; ಹಾಗಿದ್ದಲ್ಲಿ, ಸ್ಥಗಿತಗೊಳಿಸಲು ಕಾರಣಗಳೇನು; | ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 344 ಮುನೋಮು 2008 ದಿನಾಂಕ: 06-04-2009 ರಂತೆ ನಿವೇಶನಗಳ ನೋಂದಣಿಗೆ ನಿಗಧಿಪಡಿಸಿರುವ ಅಗತ್ಯವಾದ ದಾಖಲೆಗಳನ್ನು ಪಕ್ಷಕಾರರು ದಸ್ತಾವೇಜುಗಳ ನೋಂದಣಿ ಸಮಯದಲ್ಲಿ ಹಾಜರುಪಡಿಸಿದ್ದಲ್ಲಿ ಅಂತಹ ದಸ್ತಾವೇಜುಗಳನ್ನು ನೋಂದಾಯಿಸಲಾಗುತ್ತಿದೆ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳಿಗೆ ಸಂಬಂಧಿಸಿದ ದಸ್ತಾವೇಜುಗಳನ್ನು ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 06 ಮುನೋಮು 2013, ದಿನಾಂಕ:18-07-2014 ರನ್ವಯ ಇ-ಸ್ವತ್ತು ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಾಯಿಸಲಾಗುತ್ತಿದೆ. |
| ಇ | ಸ್ಥಗಿತಗೊಳಿಸಿರುವ ಕಂದಾಯ ನಿವೇಶನಗಳ ನೋಂದಣಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು; | |

| | | |
|---|---|---|
| ಈ | ಕಂದಾಯ ನಿವೇಶನಗಳನ್ನು ನೋಂದಣಿ ಮಾಡಿಸಲು ಇರುವ ಮಾರ್ಗಸೂಚಿ ಹಾಗೂ ಷರತ್ತುಗಳೇನು? | ಕೃಷಿ ಜಮೀನಿನ ನೋಂದಣಿಗೆ ಭೂಮಿ ತಂತ್ರಾಂಶದೊಂದಿಗೆ 2006 ರಿಂದಲೇ ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲಾಗಿರುತ್ತದೆ.<br><br>ಜಮೀನಿನ ಸರ್ವೆ ನಕ್ಷೆ (ಸ್ಕೆಚ್) - ನಮೂನೆ-11ಇ ಇರುವ ಮೋಜಿಣಿ ತಂತ್ರಾಂಶದೊಂದಿಗೆ ಕಾವೇರಿ ತಂತ್ರಾಂಶವನ್ನು ದಿನಾಂಕ: 05-10-2016 ರಿಂದಲೇ ಸಂಯೋಜನೆ ಮಾಡಲಾಗಿದೆ.<br><br>ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೃಷಿಯೇತ್ತರ ಸ್ವತ್ತುಗಳ ದಸ್ತಾವೇಜುಗಳ ನೋಂದಣಿಗಾಗಿ ಇ-ಸ್ವತ್ತು ತಂತ್ರಾಂಶವನ್ನು ಕಾವೇರಿ ತಂತ್ರಾಂಶದೊಂದಿಗೆ ದಿನಾಂಕ:18-07-2014ರ ಸುತ್ತೋಲೆಯಲ್ಲಿ ಸಂಯೋಜನೆಗೊಳಿಸಲ್ಪಾಗಿದೆ.<br><br>ಸ್ವತ್ತುಗಳಿಗೆ ಇ-ಆಸ್ತಿ ಖಾತಾ ಇಲ್ಲದಿದ್ದಲ್ಲಿ ಅಥವಾ ನೋಂದಣಿ ಮತ್ತು ಮುದ್ರಾಂಕ ಶುಲ್ಕ ವಂಚನೆ ಮಾಡಬೇಕಿದ್ದಲ್ಲಿ, ಸಾರ್ವಜನಿಕರು ಸಂಯೋಜನೆಯೇತರ ನೋಂದಣಿಯ ಮಾದರಿಯನ್ನು ಆಯ್ಕೆ ಮಾಡಿಕೊಂಡು ದಸ್ತಾವೇಜನ್ನು ನೋಂದಾಯಿಸಿಕೊಳ್ಳಲು ಇರುವ ಅವಕಾಶವನ್ನು ದುರುಪಯೋಗಪಡಿಸಿಕೊಂಡು ಕಾವೇರಿ ತಂತ್ರಾಂಶದಲ್ಲಿ ಸ್ವತ್ತಿನ ಸ್ವರೂಪವನ್ನು "ಇತರೆ" ಎಂದು ಆಯ್ಕೆ ಮಾಡಿಕೊಂಡು ಕೆಲವು ಕಛೇರಿಗಳಲ್ಲಿ ಕ್ರಮಬದ್ಧವಲ್ಲದ ಸ್ವತ್ತುಗಳ ನಕಲಿ ಖಾತೆಗಳನ್ನು ಸೃಜಿಸಿ, ವಂಚನೆಯಿಂದ ನೋಂದಣಿ ಮಾಡಲಾಗುತ್ತಿರುವುದು ಕಂಡು ಬಂದಿರುವುದರಿಂದ ಹಾಗೂ ಸ್ಥಿರಾಸ್ತಿಗಳಿಗೆ ಸಂಬಂಧಿಸಿದ ದಸ್ತಾವೇಜುಗಳನ್ನು ಸ್ವತ್ತನ್ನು ಗುರುತಿಸಬಲ್ಲ ವಿವರಣೆ ಇಲ್ಲದ ಹೊರತು ನೋಂದಣಿಗೆ ಸ್ವೀಕರಿಸಬಾರದೆಂದು ನೋಂದಣಿ ಕಾಯ್ದೆ 1908ರ ಕಲಂ 21ರಲ್ಲಿ ಅವಕಾಶ ಕಲ್ಪಿಸಿರುವುದರಿಂದ, ಇ-ಖಾತೆಯಲ್ಲಿ ಸ್ವತ್ತಿನ ಪಿಐಡಿ ಸಂಖ್ಯೆ ಸಂಯೋಜನೆಯಿಂದ ಲಭ್ಯವಾಗುವುದರಿಂದ ಹಾಗೂ ಮಾಹಿತಿ/ ದಾಖಲಾತಿ/ ಅಧಿಕೃತ ಬಲ್ಲಮೂಲಗಳಿಂದ ಬರುವುದರಿಂದ, ಕಾವೇರಿ-2.0 ತಂತ್ರಾಂಶದಲ್ಲಿ ಕೃಷಿಯೇತರ ಸ್ವತ್ತುಗಳನ್ನು ಒಳಗೊಂಡಿರುವ ದಸ್ತಾವೇಜುಗಳಿಗೆ ಕಡ್ಡಾಯವಾಗಿ ಇ-ಸ್ವತ್ತು ಅಥವಾ ಇ-ಆಸ್ತಿ ತಂತ್ರಾಂಶಗಳಿಂದ ಮಾಹಿತಿ |

| | | |
|---|---|---|
| | | ಪಡೆದು ನೋಂದಾಯಿಸಲು ಹಾಗೂ ಸಂಯೋಜನೆಯೇತರ ವಿಧಾನದಲ್ಲಿ ನೋಂದಣಿಯನ್ನು ನಿಲ್ಲಿಸುವ ನಿಟ್ಟಿನಲ್ಲಿ ಹಾಗೂ ಇ-ಆಸ್ತಿ ತಂತ್ರಾಂಶವನ್ನು ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ-2 ತಂತ್ರಾಂಶದೊಂದಿಗೆ ಸಂಯೋಜಿಸಿ ಈಗಾಗಲೇ ಜಾರಿಯಲ್ಲಿರುವ 41 ವಾರ್ಡ್‌ಗಳೊಂದಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ವಾರ್ಡ್‌ಗಳಿಗೂ ಸಹ ದಿನಾಂಕ: 30/09/2024ರಿಂದ ಜಾರಿಗೊಳಿಸಲಾಗಿದೆ.<br><br>ಇದರಿಂದಾಗಿ, ಇ-ಖಾತಾ ಸಂಯೋಜನೆಯ ನಂತರ ಕಾನೂನು ಬಾಹಿರ ಮತ್ತು ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿಕೊಂಡು ನೋಂದಣಿ ಮಾಡಿಸಿಕೊಳ್ಳುತ್ತಿದ್ದ, ದಸ್ತಾವೇಜುಗಳ ಸಂಖ್ಯೆ ಕಡಿಮೆಯಾಗಿದೆಯೇ ಹೊರತು ನೈಜ ದಸ್ತಾವೇಜುಗಳ ನೋಂದಣಿ ಕಡಿಮೆಯಾಗಿರುವುದಿಲ್ಲ. |

ಕಂಇ/125/ಎಂಎನ್‌ಎಸ್‌ಎ/2023

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು